**<u>ಅಸಲು ದಾವಾ ಸಂಖ್ಯೆ - 05/2015</u>** **ಪಿ.ಡಬ್ಲ್ಯೂ:-2**

ದಿನಾಂಕಃ **08-02-2024** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

**<u>ಪಾಟೀ ಸವಾಲು :- 1, 2 ಮತ್ತು 4 ನೇ ಪ್ರತಿವಾದಿ ಪರ ವಕೀಲರಿಂದ :-</u>**

ನನಗೆ ಪ್ರತಿವಾದಿಗಳ ಪರಿಚಯವಿರುತ್ತದೆ. ನಾನು ಮತ್ತು ಪ್ರತಿವಾದಿಗಳು ಒಂದೇ ಊರಿನವರು ಎಂದರೆ ಸರಿ. ನನ್ನ ಮುಖ್ಯ ವಿಚಾರಣೆಯಲ್ಲಿ ನಮೂದಾಗಿರುವ ವಿಚಾರಗಳನ್ನು ನಾನು ಹೇಳಿ ಬರೆಸಿರುತ್ತೇನೆ. ಈ ದಾವೆಯನ್ನು ಮಾಲೀಕತ್ವದ ಹಕ್ಕನ್ನು ಕೋರಿ ದಾವೆಯನ್ನು ಸಲ್ಲಿಸಿರುತ್ತೇವೆ. ದಾವಾ ಆಸ್ತಿ ಸರ್ವೆ ನಂ. 30/1 ವಿಸ್ತೀರ್ಣ 15 ಗುಂಟೆ ಜಮೀನು ಐನೂರು ಗ್ರಾಮದಲ್ಲಿ ಇರುತ್ತದೆ. ದಾವಾ ಆಸ್ತಿಯು ನಮ್ಮ ಪಿತ್ರಾರ್ಜಿತ ಆಸ್ತಿ ಆಗಿರುತ್ತದೆ. ದಾವಾ ಆಸ್ತಿಯು ನಮ್ಮ ಪಿತ್ರಾರ್ಜಿತ ಆಸ್ತಿ ಎಂದು ತೋರಿಸಲು ನ್ಯಾಯಾಲಯಕ್ಕೆ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ. ದಾವಾ ಆಸ್ತಿಯು ನಮ್ಮ ಪಿತ್ರಾರ್ಜಿತ ಆಸ್ತಿ ಅಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಖಾತೆ ನಮ್ಮ ಹೆಸರಿನಲ್ಲಿ ಇಲ್ಲ ಎಂದರೆ ಸರಿಯಲ್ಲ. ನಾನು ದಾವಾ ಆಸ್ತಿಯ ಸ್ವಾಧೀನಾನುಭವದಲ್ಲಿ ಇಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಪ್ರತಿವಾದಿಗಳು ಮನೆಯನ್ನು ಕಟ್ಟಿಕೊಂಡು ವಾಸವಾಗಿದ್ದರೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ದಾವಾ ಆಸ್ತಿಯಲ್ಲಿ ಸುಮಾರು 30 ರಿಂದ 40 ವರ್ಷಗಳಿಂದಲೂ ಸ್ವಾಧೀನಾನುಭದಲ್ಲಿ ಇದ್ದಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಗೆ ಸಂಬಂಧಿಸಿದಂತೆ ಕಂದಾಯವನ್ನು ಪ್ರತಿವಾದಿಗಳು ಪಾವತಿ ಮಾಡುತ್ತಿದ್ದಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಗೆ ಸಂಬಂಧಿಸಿದಂತೆ ಖಾತೆ ಎಕ್ಸ್ ಟ್ರಕ್ಸ್ ಪ್ರತಿವಾದಿಗಳ ಹೆಸರಿನಲ್ಲಿ ಇದೆ ಎಂದರೆ ಸರಿಯಲ್ಲ. ಸ್ವತ್ತಿನ ನಂ.91 ವಿಸ್ತೀರ್ಣ 66 X 110 ರಲ್ಲಿ 1 ಮತ್ತು 2 ನೇ ಪ್ರತಿವಾದಿಗಳ ತಾಯಿ ರತ್ನಮ್ಮರವರು ಮನೆಯನ್ನು ಕಟ್ಟಿಕೊಂಡು ವಾಸವಾಗಿದ್ದರೆ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಚೆಕ್ಕು ಬಂಧಿ ಪೂರ್ವಕ್ಕೆ ಖಾಸಿಂ ಸಾಬ್ ರವರ ಜಮೀನು, ಪಶ್ಚಿಮಕ್ಕೆ ದೇವಸ್ಥಾನಕ್ಕೆ ಸಂಬಂಧಿಸಿದ ಜಮೀನು, ಉತ್ತರಕ್ಕೆ ರಾಂಪುರಕ್ಕೆ ಹೋಗುವ ರಸ್ತೆ ಮತ್ತು ದಕ್ಷಿಣಕ್ಕೆ ಉಂಬಳಿ ಜಮೀನು ಇರುತ್ತದೆ. ದಾವಾ ಆಸ್ತಿಯನ್ನು 2 ನೇ ಪ್ರತಿವಾದಿ ಟಿ ನರಸಿಂಹಪ್ಪ ಬಿನ್ ಕಂಬಪ್ಪರವರಿಂದ ಖರೀದಿ ಮಾಡಿದರೆ ಎಂದರೆ ಸರಿಯಲ್ಲ. ದಾವಾ

ಆಸ್ತಿಯಲ್ಲಿ ನಾನು ಯಾವತ್ತು ಸ್ವಾಧೀನಾನುಭವದಲ್ಲಿ ಇಲ್ಲ ಪ್ರತಿವಾದಿಗಳು ದಾವಾ ಆಸ್ತಿಯಲ್ಲಿ ಸ್ವಾಧೀನಾನುಭವದಲ್ಲಿ ಇದ್ದಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಪ್ರತಿವಾದಿಗಳು ಮನೆಯನ್ನು ಕಟ್ಟಿಕೊಂಡು ವಾಸವಾಗಿದ್ದರೆ ಎಂದರೆ ಸರಿಯಲ್ಲ. ಪ್ರತಿವಾದಿಗಳನ್ನು ಹೊರತುಪಡಿಸಿದರೆ ದಾವಾ ಆಸ್ತಿಯ ಮೇಲೆ ನನಗೂ ಯಾವುದೇ ರೀತಿಯ ಹಕ್ಕು, ಬಾಧ್ಯತೆ ಹಿತ್ತಾಸಕ್ತಿ ಇಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಗೆ ಸಂಬಂಧಿಸಿದಂತೆ ನನ್ನ ಮತ್ತು 2 ನೇ ಪ್ರತಿವಾದಿಯ ನಡುವೆ ಯಾವತ್ತು ಗಲಾಟೆಯಾಗಿರುವುದಿಲ್ಲ. ದಾವೆಯು ಕಾನೂನು ಅಡ್ಡಿಯಲ್ಲಿ ಊರ್ಜಿತವಾಗುವುದಿಲ್ಲ ಎಂದರೆ ಸರಿಯಲ್ಲ. ವಾದ ಪತ್ರದಲ್ಲಿ ಮತ್ತು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ನಮೂದಾಗಿರುವ ವಿಚಾರಗಳು ಸುಳ್ಳಿನಿಂದ ಕೂಡಿದೆ ಎಂದರೆ ಸರಿಯಲ್ಲ.

ಮರು ವಿಚಾರಣೆ:- ಇಲ್ಲ

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.